ಬೆಂಗಳೂರು ನಗರ ವಿಶ್ವವಿದ್ಯಾನಿಲಯ
BENGALURU CITY UNIVERSITY
ಸೆಂಟ್ರಲ್ ಕಾಲೇಜು ಆವರಣ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
Ph.No.080-22961016 / 2213l385 E-Mail ID: registrarbcu@gmail.com

ಸಂಖ್ಯೆ: ಬೆ.ನ.ವಿ./ಕು.ಸ./ಸಂಯೋಜನಾ/2022-23 ದಿನಾಂಕ: 16.01.2023

## ಅಧಿಸೂಚನೆ

ವಿಷಯ : 2022-23ನೇ ಶೈಕ್ಷಣಿಕ ಸಾಲಿಗೆ RBANMS First Grade College. #12, Annaswamymudliar road, Banglaore-42. ಇವರಿಗೆ ತಾತ್ಕಾಲಿಕ ಸಂಯೋಜನೆ ನವೀಕರಣ ಮತ್ತು ಶಾಶ್ವತ ಸಂಯೋಜನೆ ವಿಸ್ತರಣೆ ಮಾಡುವ ಬಗೆಗೆ.

ಉಲ್ಲೇಖ : 1. ಸರ್ಕಾರಿ ಆದೇಶ ಸಂಖ್ಯೆ: ಇಡಿ34ಇಜಿಒವಿ2020(ಭಾಗ-2) ದಿನಾಂಕ:26.04.2022
2. ಸರ್ಕಾರಿ ಆದೇಶ ಸಂಖ್ಯೆ: ಇಡಿ 448 ಯುಬಿವಿ 2022 ದಿನಾಂಕ: 21.09.2022
3. ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ ಸಭೆಯ ಅನುಮೋದನೆ ದಿನಾಂಕ: 28.06.2022

• • •

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ನಗರ ವಿಶ್ವವಿದ್ಯಾನಿಲಯವು, 2022-23ನೇ ಸಾಲಿಗೆ ಬೆಂಗಳೂರಿನ RBANMS First Grade College. #12, Annaswamymudliar road, Banglaore-42. ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ತಾತ್ಕಾಲಿಕ ಸಂಯೋಜನೆ ನವೀಕರಿಸಿ ಮತ್ತು ಶಾಶ್ವತ ಸಂಯೋಜನೆಯನ್ನು 2022-23ನೇ ಸಾಲಿನಿಂದ 2026-27ರ ವರೆಗೆ 5 ವರ್ಷಗಳ ಅವಧಿಗೆ ವಿಸ್ತರಣೆ ಮಾಡಿ ಮುಂದುವರಿಸಿದೆ.

| ಕೋರ್ಸು | ವಿಷಯ, ಶಿಸ್ತಿನ/ಮೂಲ ವಿಷಯಗಳು ( Subject, Discipline / Core subjects) | ವಿದ್ಯಾರ್ಥಿ ಪ್ರಮಾಣ |
|---|---|---|
| **Extension of Permanent Affiliation** | | |
| BA | (Economics) * | 100 (ನೂರು) |
| BA | (History) * | 100 (ನೂರು) |
| BA | (Political Science)* | 100 (ನೂರು) |
| B.Sc | B.Sc (Computer Science)* | 40 (ನಲವತ್ತು) |
| B.Sc | B.Sc (Mathematics) * | 40 (ನಲವತ್ತು) |
| B.Sc | B.Sc (Statistics) * | 40 (ನಲವತ್ತು) |
| BCA | General * | 60 (ಅರವತ್ತು) |
| B.Com | General * | 200 (ಇನ್ನೂರು) |
| BBA | General * | 60 (ಅರವತ್ತು) |
| **Renewal of Temporary Affiliation** | | |
| M.Com | General | 40 (ನಲವತ್ತು) |

* ಆಸ್ಟ್ರಿಕ್ ಗುರುತುಳ್ಳ ಕೋರ್ಸುಗಳು 2022-23ನೇ ಸಾಲಿನಿಂದ 2026-27ನೇ ಸಾಲಿನವರೆಗೆ ಐದು ವರ್ಷಗಳ ಅವಧಿಗೆ ಶಾಶ್ವತ ಸಂಯೋಜನೆಯನ್ನು ಹೊಂದಿರುತ್ತದೆ.



Scanned with OKEN Scanner

12. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.

13. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.

14. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

15. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

16. ವಿದ್ಯಾರ್ಥಿಗಳು ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

17. ಕಾಲೇಜು ವಿದ್ಯಾರ್ಥಿಗಳ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಇತರೇ ದಾಖಲೆಗಳನ್ನು ಮೂರು ತಿಂಗಳ ಅವಧಿಯೊಳಗೆ ವಿದ್ಯಾರ್ಥಿಗಳಿಗೆ ನೀಡಬೇಕು. ಅವಧಿ ಮೀರಿದ ನಂತರ ತಮ್ಮಲ್ಲಿಯೇ ಉಳಿದುಕೊಂಡಿರುವ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತ್ರಗಳ ಬಗ್ಗೆ ಕುಲಸಚಿವರು (ಮೌಲ್ಯಮಾಪನ) ಇವರಿಗೆ ವರದಿ ನೀಡತಕ್ಕದ್ದು.

18. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

19. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

20. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

21. 2023-24ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

22. *ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್(NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.*

23. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

24. ವಿಶ್ವವಿದ್ಯಾನಿಲಯದ ಶೈಕ್ಷಣಿಕ ವೇಳಾಪಟ್ಟಿಯ ಪ್ರಕಾರ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಳ್ಳತಕ್ಕದ್ದು.

ಆದೇಶದ ಮೇರೆಗೆ

ಕುಲಸಚಿವರು

ಗೆ,

ಪ್ರಾಂಶುಪಾಲರು,

**RBANMS First Grade College. #12, Annaswamymudliar road, Banglaore-42.**

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು- 01.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು- 01.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು- 01



Scanned with OKEN Scanner